ಅ) ತಯಾರಿಸಲಾಗಿದೆ

ಆ) ತಾಂತ್ರಿಕ ಶಕ್ಯತೆ ಹಾಗೂ ಆರ್ಥಿಕ ಲಭ್ಯತೆಯನ್ನು ಆಧರಿಸಿ ಕ್ರಮ ಕೈಗೊಳ್ಳಲಾಗುವುದು.

ಇ) ಪರಿಶೀಲನೆಯಲ್ಲಿದೆ.

ತರೀಕೆರೆ ತಾಲ್ಲೂಕು ಶಿವನಿಯಲ್ಲಿ ಪೊಲೀಸ್ ಠಾಣೆಯನ್ನು ತೆರೆಯುವ ಬಗ್ಗೆ.

2253(ಎಸ್‌ಕೆ)

ಶ್ರೀ ನೀಲಕಂಠಪ್ಪ ಬಿ.ಆರ್(ತರೀಕೆರೆ): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತರೀಕೆರೆ ತಾಲ್ಲೂಕಿನ ಶಿವನಿಯಲ್ಲಿ ಪೋಲೀಸ್ ಠಾಣೆ ತೆರೆಯುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೆ;

ಆ) ಹಾಗಿದ್ದಲ್ಲಿ ಎಂದಿನಿಂದ ತೆರೆಯಲಾಗುವುದು?

ಶ್ರೀ ಮಲ್ಲಿಕಾರ್ಜುನ.ಎಂ. ಖರ್ಗೆ (ಗೃಹ ಸಚಿವರು):

ಅ ಮತ್ತು ಆ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ೧೦ ಪೊಲೀಸು ಠಾಣೆಗಳನ್ನು ತೆರೆಯಲುದ್ದೇಶಿಸಲಾಗಿದೆ. ಪೊಲೀಸ್ ಠಾಣೆಗಳು ಅತ್ಯಗತ್ಯವಿರುವಂತಹ ಸ್ಥಳಗಳನ್ನು ಗುರುತಿಸಿ, ಅಂತಹ ಸ್ಥಳಗಳಲ್ಲಿ ಪೊಲೀಸು ಠಾಣೆಗಳನ್ನು ತೆರೆಯಲಾಗುವುದು.

ರಾಜ್ಯದಲ್ಲಿ ಭೂ ವಿವಾದಗಳಿಂದಾಗಿ ಅಪರಾಧಗಳು ಹೆಚ್ಚುತ್ತಿರುವ ಬಗ್ಗೆ.

2254(2815)

ಶ್ರೀ ಆರ್.ನಾರಾಯಣ(ಬೆಳ್ಳಾವಿ): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಭೂ ವಿವಾದಗಳಿಂದಾಗಿ ಅಪರಾಧಗಳ ಸಂಖ್ಯೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಲ್ಯಾಂಡ್ ಮಾಫಿಯಾಗಳು ಇತ್ತೀಚೆಗೆ ತಲೆ ಎತ್ತುತ್ತಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ? ಭೂವಿವಾದದಿಂದ ಹೆಚ್ಚಿರುವ ಅಪರಾಧಗಳ ಸಂಖ್ಯೆಗಳ ಹಿನ್ನೆಲೆಯಲ್ಲಿ ಭೂ ಕಂದಾಯ ಕಾಯ್ದೆ ಹಾಗೂ ಇತರೇ ಭೂ ಕಂದಾಯಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಕೂಲಂಕುಷವಾಗಿ ಮರು ಪರಿಶೀಲನೆ ನಡೆಸಲು ಗೃಹ, ಕಂದಾಯ, ಕಾನೂನು ಹಾಗೂ ಸಂಬಂಧಪಟ್ಟವರನ್ನೊಳಗೊಂಡ ಸಮಿತಿ ಅಥವಾ ಟಾಸ್ಕ್ ಫೋರ್ಸನ್ನು ರಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ/

ಶ್ರೀ ಎಂ.ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು):

ಅ) ಬಂದಿದೆ.

ಆ) ಯಾವುದೆ ಭೂವಿವಾದದಲ್ಲಿ ಲ್ಯಾಂಡ್ ಮಾಫಿಯಾ ಕೈವಾಡವಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಇ) ಈ ಅಪರಾಧಗಳನ್ನು ಈಗಿರುವ ಕಾನೂನುಗಳ ಅಡಿಯಲ್ಲಿ ಸಮರ್ಪಕವಾಗಿ ನಿರ್ವಹಿಸುತ್ತಿದ್ದು ಟಾಸ್ಕ್‌ಫೋರ್ಸ್‌ನ ಅವಶ್ಯಕತೆ ಇರುವುದಿಲ್ಲ.

ಆನೇಕಲ್ ಕ್ಷೇತ್ರಕ್ಕೆ ಸಣ್ಣ ನೀರಾವರಿ ಇಲಾಖೆವತಿಯಿಂದ ಮಂಜೂರಾಗಿರುವ ಯೋಜನೆಗಳು.

2255(2748)

ಶ್ರೀ ವಿ.ನಾರಾಯಣಸ್ವಾಮಿ(ಆನೇಕಲ್): ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆನೇಕಲ್ ಕ್ಷೇತ್ರಕ್ಕೆ ಸಣ್ಣ ನೀರಾವರಿ ಇಲಾಖೆಯ ವತಿಯಿಂದ ಮಂಜೂರಾಗಿರುವ ವಿವಿಧ ಯೋಜನೆಗಳು ಯಾವುವು;

ಆ) ಮಂಜೂರಾದ ಯೋಜನೆಗಳ ಅನುಷ್ಠಾನಕ್ಕೆ ವಿಳಂಬವಾಗಲು ಕಾರಣಗಳೇನು;

ಇ) ನೀರಿಗಾಗಿ ಏತ ನೀರಾವರಿ ಮತ್ತು ಕೆರೆ ಅಭಿವೃದ್ಧಿ ಯೋಜನೆಗಳ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ?

ಶ್ರೀ ಎಸ್.ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು):

ಅ) ವಿವರಗಳು ಈ ರೀತಿ ಇವೆ. (ಅನುಬಂಧ - 1)